ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಕುಸಿಯುತ್ತಿರುವ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

585 (556) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ದಿನೇ ದಿನೇ ಕುಸಿಯುತ್ತಿದ್ದು ಅಂತರ್ಜಲ ವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವ ಕಾರ್ಯಕ್ರಮಗಳಿಗೆ ಕಳೆದ ಮೂರು ವರ್ಷಗಳಲ್ಲಿ ಇಟ್ಟಿರುವ ಅನುದಾನವೆಷ್ಟು; ಖರ್ಚಾದ ಹಣವೆಷ್ಟು; (ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸುವುದಕ್ಕೆ ವಿಶೇಷ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)